**ಅಸಲು ದಾವೆ ಸಂಖ್ಯೆ.71/2016**

**ಡಿ.ಡಬ್ಲ್ಯೂ:2**

**ದಿನಾಂಕಃ17.11.2022 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ವಾದಿಪರ ಶ್ರೀ. ಎಸ್.ಎನ್.ಜಿ ವಕೀಲರಿಂದಃ-**

7 ನೇ ಪ್ರತಿವಾದಿಗೆ ಎಷ್ಟು ಆಸ್ತಿ ಇದೆ ಎಂದು ನನಗೆ ಗೊತ್ತಿರುವುದಿಲ್ಲ. ವಾದಿಗೆ ಸೇರಿದ ಆಸ್ತಿಯ ವಿಸ್ತೀರ್ಣ ನನಗೆ ಗೊತ್ತಿರುವುದಿಲ್ಲ. ನನ್ನ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಸರ್ವೆ ನಂಬರ್ 1 ಪಿ ಆಸ್ತಿಯು 7 ನೇ ಪ್ರತಿವಾದಿಗೆ ಸೇರಿರುತ್ತದೆ. 7 ನೇ ಪ್ರತಿವಾದಿಯ ಆಸ್ತಿಯ ದಕ್ಷಿಣ ದಿಕ್ಕಿಗೆ ವಾದಿಯ ಆಸ್ತಿ ಬರುತ್ತದೆ. ವಾದಿಯರು ಯಾವ ವಿಚಾರವಾಗಿ ಪ್ರತಿವಾದಿಯ ವಿರುದ್ದ ದಾವೆ ಸಲ್ಲಿಸಿದ್ದಾರೆ ಎಂದು ನನಗೆ ಗೊತ್ತಿರುವುದಿಲ್ಲ. ವಾದಿ ಮತ್ತು ಪ್ರತಿವಾದಿಗಳು ಪ್ರತ್ಯೇಕವಾಗಿ ಸ್ವಾಧೀನ ಇರುತ್ತಾರೆ ಆದರೆ ಎಷ್ಟು ವಿಸ್ತೀರ್ಣದಲ್ಲಿ ಸ್ವಾಧೀನ ಇದ್ದಾರೆ ಎಂದು ಗೊತ್ತಿಲ್ಲ. ದಾವಾ ಆಸ್ತಿಯನ್ನು ಅಳತೆಮಾಡಿರುವ ಬಗ್ಗೆ ನನಗೆ ಗೊತ್ತಿರುವುದಿಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ ಮತ್ತು ನನಗೆ ಓದಿ ಹೇಳಿರುವುದಿಲ್ಲ. 7 ನೇ ಪ್ರತಿವಾದಿಯ ಮಾತುಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. 7 ನೇ ಪ್ರತಿವಾದಿ ವಾದಿಗೆ ಸೇರಿದ ಆಸ್ತಿಯನ್ನು ಒತ್ತುವರಿ ಮಾಡದಿದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

Sd/-

ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದಃನ್ಯಾ:ದಂ.,ರವರು, ಕಡೂರು.